# ವಾರ್ಡ್ ಸಭೆ ಸಂಖ್ಯೆ.30

ದಿನಾಂಕ:.18.03.2022 ರಂದು ಸಮಯ 11:00 ಗಂಟೆಗೆ ವಾರ್ಡ್.ಸಂಖ್ಯೆ.44 ಮಾರಪ್ಪನಪಾಳ್ಯ ವಾರ್ಡ್ ಕಛೇರಿಯಲ್ಲಿ ವಾರ್ಡ್ ಕಮಿಟಿ ಸಭೆಯನ್ನು ಮಾನ್ಯ ನೋಡಲ್ ಅಧಿಕಾರಿ (ಅಧ್ಯಕ್ಷರು) ರವರ ಅಧ್ಯಕ್ಷತೆಯಲ್ಲಿ ಕರೆಯಲಾಗಿತ್ತು.

ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳು

1. ಶ್ರೀ ಎಲ್ ವೆಂಕಟೇಶ್ ನೋಡಲ್ ಅಧಿಕಾರಿ ರವರು, ವಾರ್ಡ್.ಸಂಖ್ಯೆ.44, ಮಾರಪ್ಪನಪಾಳ್ಯ. (ಅಧ್ಯಕ್ಷರು)
2. ಶ್ರೀ ಧನಂಜಯ ಜಿ.ಟಿ ಸಹಾಯಕ ಅಭಿಯಂತರರು, ವಾರ್ಡ್.ಸಂಖ್ಯೆ.44, ಮಾರಪ್ಪನಪಾಳ್ಯ. (ಕಾರ್ಯದರ್ಶಿ)
3. ಶ್ರೀ ವೈ.ಆರ್ ವೆಂಕಟೇಶ್ ಸದಸ್ಯರು.
4. ಶ್ರೀಮತಿ ಮಹಾಲಕ್ಷ್ಮೀ ಸದಸ್ಯರು.
5. ಶ್ರೀ ನಂಜೇಗೌಡ ಸದಸ್ಯರು.
6. ಶ್ರೀ ರಾಜೇಶ್ ಸದಸ್ಯರು.
7. ಶ್ರೀ ನಾಗೇಂದ್ರ ಸದಸ್ಯರು.
8. ಶ್ರೀ ಗೋಪಿ ಸದಸ್ಯರು.
9. ಶ್ರೀಮತಿ ರಶ್ಮಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ), ಮಹಾಲಕ್ಷ್ಮೀಪುರಂ ವಿಭಾಗ.
10. ಶ್ರೀ ಪ್ರದೀಪ್‌ಕುಮಾರ್ ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
11. ಶ್ರೀ ಛಾಯಪತಿ ಎಂ ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
12. ಶ್ರೀ ಜಿ.ಕೆ ವೆಂಕಟೇಶಯ್ಯ, ಕೆಲಸ ಪರಿವೀಕ್ಷಕರು, ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
13. ಶ್ರೀ ವಿಠ್ಠಲ್, ಮೀಟರ್ ರೀಡರ್ (ಬಿ.ಡಬ್ಲ್ಯೂ.ಎಸ್.ಎಸ್.ಬಿ), ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
14. ಶ್ರೀ ದಿನೇಶ್ ಕುಮಾರ್ ಸಹಾಯಕ ಅಭಿಯಂತರರು (ಬೆಸ್ಕಾಂ) ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
15. ಶ್ರೀ ನಿಂಗರಾಜು ಎನ್, ಕಂದಾಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
16. ಶ್ರೀ ರಂಜಿತ್ ಮಾರ್ಷಲ್ ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.

ಶ್ರೀ ಧನಂಜಯ ಜಿ.ಟಿ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಸದಸ್ಯರನ್ನು, ಅಧಿಕಾರಿಗಳನ್ನು ಹಾಗೂ ಸಾರ್ವಜನಿಕರನ್ನು ಸಭೆಗೆ ಸ್ವಾಗತಿಸಲಾಯಿತು.

| ಕ್ರ. ಸಂ | ವಿವರಣೆ | ಕ್ರಮ |
|---|---|---|
| 1. | ಕಾರ್ಯದರ್ಶಿಗಳು ಹಿಂದಿನ ಸಭೆಯ ನಡವಳಿಗಳನ್ನು ಸಭೆಯಲ್ಲಿ ಹಾಜರಿದ್ದ ಸದಸ್ಯರಿಗೆ, ಅಧಿಕಾರಿಗಳಿಗೆ ಓದಿ ತಿಳಿಸಿದರು. | - |
| 2. | ಕಾರ್ಯದರ್ಶಿಗಳು ಸಾರ್ವಜನಿಕರ ಸಮಸ್ಯೆಗಳಿಗೆ ಮೊದಲ ಆದ್ಯತೆ ನೀಡಿ ಸಮಸ್ಯೆಯನ್ನು ತಿಳಿಸುವಂತೆ ಸಾರ್ವಜನಿಕರನ್ನು ಕೋರಿದರು. | - |
| 3. | ಸಭೆಯಲ್ಲಿ ಹಾಜರಿದ್ದ ಸದಸ್ಯರು ಹಾಗೂ ಅಧಿಕಾರಿಗಳು ಕೋವಿಡ್ ಮತ್ತು ವ್ಯಾಕ್ಸಿನ್ ಬಗ್ಗೆ ಮಾಹಿತಿ ಕೋರಿದರು. ಇದಕ್ಕೆ ಹಿರಿಯ ಆರೋಗ್ಯ ಪರಿವೀಕ್ಷಕರು ಲಭ್ಯವಿರುವ ಮಾಹಿತಿ ನೀಡಿದರು. ಶ್ರೀ ನಾಗೇಂದ್ರ ಸದಸ್ಯರು ರವರು ವ್ಯಾಕ್ಸಿನ್ ಬಗ್ಗೆ ಕಾರ್ಯಕ್ರಮಗಳ ಬಗ್ಗೆ ಸ್ಥಳೀಯಯ ನಾಯಕರಿಗೆ ತಿಳಿಸಲು ಕೋರಿದರು. | - |
| 4. | ಸಾರ್ವಜನಿಕರು ಶಂಕರನಗರ ಮುಖ್ಯರಸ್ತೆಯಲ್ಲಿ ನೀರು ಪೋಲು ಆಗುತ್ತಿರುವ ಬಗ್ಗೆ ದೂರು ನೀಡಿದರು. ಇದಕ್ಕೆ ಮಾನ್ಯ ಅಧ್ಯಕ್ಷರು ಸಂಭಂದಪಟ್ಟ ಅಧಿಕಾರಿಗಳಿಗೆ ಸಮಸ್ಯೆ ಪರಿಹರಿಸಲು ಸೂಚಿಸಿದರು. | - |
| 5. | ಸಾರ್ವಜನಿಕರು ಶಂಕರನಗರದ ವ್ಯಾಪ್ತಿಯಲ್ಲಿ ಇರುವ ತ್ಯಾಜ್ಯವನ್ನು (Debries) ತೆರವುಗೊಳಿಸಲು ಕೋರಿದರು. ಇದಕ್ಕೆ ಕಾರ್ಯದರ್ಶಿಗಳು ತೆರವುಗೊಳಿಸಲಾಗುವುದು ಎಂದು ತಿಳಿಸಿದರು. | |
| 6. | ಶ್ರೀಮತಿ ಮಹಾಲಕ್ಷ್ಮೀ ಸದಸ್ಯರು ರವರು ಅಶೋಕಪುರಂ ವ್ಯಾಪ್ತಿಯಲ್ಲಿ ಕೊಳವೆ ಬಾವಿಗಳ ಪ್ಯಾನಲ್‌ಗಳು ಹಾಳಾಗಿರುತ್ತವೆ ಎಂದು ತಿಳಿಸಿದರು. ಇದಕ್ಕೆ ಕಾರ್ಯದರ್ಶಿಗಳು ಅಂದಾಜು ಪಟ್ಟಿಯಲ್ಲಿ ಸೇರಿಸಲಾಗಿದೆ ಎಂದು ತಿಳಿಸಿದರು. | - |
| 7. | ಸಭೆಯಲ್ಲಿ ಹಾಜರಿದ್ದ ಸದಸ್ಯರು ಹಾಗೂ ಅಧಿಕಾರಿಗಳು ಕೋವಿಡ್ ಮತ್ತು ವ್ಯಾಕ್ಸಿನ್ ಬಗ್ಗೆ ಮಾಹಿತಿ ಕೋರಿದರು. ಇದಕ್ಕೆ ಹಿರಿಯ ಆರೋಗ್ಯ ಪರಿವೀಕ್ಷಕರು ಲಭ್ಯವಿರುವ ಮಾಹಿತಿ ನೀಡಿದರು. ಶ್ರೀ ನಾಗೇಂದ್ರ ಸದಸ್ಯರು ರವರು ವ್ಯಾಕ್ಸಿನ್ ಬಗ್ಗೆ ಕಾರ್ಯಕ್ರಮಗಳ ಬಗ್ಗೆ ಸ್ಥಳೀಯ ನಾಯಕರಿಗೆ ತಿಳಿಸಲು ಕೋರಿದರು. | - |
| 8. | ಶ್ರೀ ನಾಗೇಂದ್ರ ಸದಸ್ಯರು ವಿಜಯಾನಂದನಗರದಲ್ಲಿ ಸ್ಯಾನಿಟರಿ ಮಾರ್ಗ ನಿರ್ಮಿಸಲು ಮೇಲಾಧಿಕಾರಿಗಳಿಗೆ ಅಂದಾಜು ಪಟ್ಟಿ ಮತ್ತು ಯೋಜನೆ ಸಲ್ಲಿಸಲಾಗಿದೆ ಎಂದು ತಿಳಿಸಲಾಗಿತ್ತು ಆದರೆ ಈವರೆಗೂ ಯಾವ ಸ್ಥಿತಿಯಲ್ಲಿ ಎಂಬ ಮಾಹಿತಿ ನೀಡಿರುವುದಿಲ್ಲ ಎಂದು ತಿಳಿಸಿದರು. ಇದಕ್ಕೆ ಕಾರ್ಯದರ್ಶಿಗಳು ಮುಂದಿನ ಸಭೆಯಲ್ಲಿ ಮಾಹಿತಿ ನೀಡುವಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರಿಗೆ ತಿಳಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |

Scanned with CamScanner

| | | |
|---|---|---|
| 9. | ಶ್ರೀ ನಾಗೇಂದ್ರ ಸದಸ್ಯರು ರವರು ಬೆಲ್ ಅಪಾರ್ಟ್‌ಮೆಂಟ್ ಇಂದ ಆರ್.ಜಿ ರಾಯಲ್ ಹೋಟೆಲ್ ವರೆಗೆ ಬೀದಿ ದೀಪಗಳು ಉರಿಯುತ್ತಿರುವುದಿಲ್ಲ ಎಂದು ತಿಳಿಸಿದರು. ಇದಕ್ಕೆ ಕಾರ್ಯದರ್ಶಿಗಳು ಸಂಬಂಧಪಟ್ಟವರಿಗೆ ಸೂಚಿಸಲಾಗುವುದು ಎಂದು ತಿಳಿಸಿದರು. | – |
| 10. | ಶ್ರೀ ನಾಗೇಂದ್ರ ಸದಸ್ಯರು ರವರು ಡಿ.ಬ್ಲ್ಯೂ.ಸಿ.ಸಿ ರಲ್ಲಿ ಪಕ್ಕದ ವಾರ್ಡ್‌ನ ಕಸ ತಂದು ಇಲ್ಲೇ segregation (ಪ್ರತ್ಯೇಕತೆ) ಮಾಡುತ್ತಿರುತ್ತಾರೆ ಎಂದು ತಿಳಿಸಿದರು. ಇದಕ್ಕೆ ಶ್ರೀಮತಿ ರಶ್ಮಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಮಹಾಲಕ್ಷ್ಮೀಪುರಂ (ಘನತ್ಯಾಜ್ಯ ವಿಭಾಗ) ರವರು ವಾರ್ಡ್ ಸಂಖ್ಯೆ.67 ರಲ್ಲಿರುವ ಕಸ ಸಂಗ್ರಹಣ ಕೇಂದ್ರ ಬಗ್ಗೆ ನ್ಯಾಯಾಲಯದಲ್ಲಿ ದಾವೆ ಇರುವುದರಿಂದ ಕೆಲವುದಿನಗಳ ಕಾಲ ವಾರ್ಡ್ ಸಂಖ್ಯೆ.44ರ ಕಸ ಸಂಗ್ರಣ ಕೇಂದ್ರದಲ್ಲಿ ಕಸ segregation ಮಾಡಲಾಗುವುದು ಎಂದು ತಿಳಿಸಿದರು. | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ) |
| 11. | ಶ್ರೀ ನಾಗೇಂದ್ರ ಸದಸ್ಯರು ರವರು ಶಿವನ ದೇವಸ್ಥಾನದ ಹತ್ತಿರ, ಮಾರಪ್ಪನಪಾಳ್ಯದ ಹತ್ತಿರ ಹಾಗೂ ಸುಭಾಸ್ ಚಂದ್ರ ಭೋಸ್ ರವರ ಪ್ರತಿಮೆ ಹತ್ತಿರ ಇರುವ ಬ್ಲಾಕ್ ಸ್ಪಾಟ್‌ಗಳನ್ನು ತೆರವುಗೊಳಿಸಲು ಕೋರಿದರು. ಇದಕ್ಕೆ ಶ್ರೀಮತಿ ರಶ್ಮಿ ರವರು ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. | ಘನತ್ಯಾಜ್ಯ ಇಲಾಖೆ |
| 12. | ಶ್ರೀ ನಾಗೇಂದ್ರ ಸದಸ್ಯರು ರವರು ಟಯೋಟ ಶೋರೂಂ ರವರು ರಸ್ತೆಯಲ್ಲಿ ವಹಾನಗಳನ್ನು ಪಾರ್ಕಿಂಗ್ ಮಾಡುತ್ತಿರುತ್ತಾರೆ ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುತ್ತದೆ ಎಂದು ತಿಳಿಸಿದರು. ಇದಕ್ಕೆ ಕಾರ್ಯದರ್ಶಿಗಳು ಸಂಬಂದಪಟ್ಟವರಿಗೆ ಸೂಚಿಸಲಾಗುವುದು ಎಂದು ತಿಳಿಸಿದರು. | ಸಂಚಾರಿ ಇಲಾಖೆ |
| 13. | ಶ್ರೀ ನಾಗೇಂದ್ರ ಸದಸ್ಯರು ರವರು ವಾರ್ಡ್ ವ್ಯಾಪ್ತಿಯಲ್ಲಿ ಬ್ಲಾಕ್ ಸ್ಪಾಟ್‌ಗಳನ್ನು ತೆರವುಗೊಳಿಸಲು ಕೈಗೊಂಡ ಕ್ರಮದ ಬಗ್ಗೆ, ಮಾರ್ಷಲ್ಸ್‌ಗಳ ಬಗ್ಗೆ ಹಾಗೂ ಪೌರಕಾರ್ಮಿಕರ ಬಗ್ಗೆ ಮಾಹಿತಿ ಕೋರಿದರು. ಇದಕ್ಕೆ ಶ್ರೀಮತಿ ರಶ್ಮಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಮಹಾಲಕ್ಷ್ಮೀಪುರಂ (ಘನತ್ಯಾಜ್ಯ ವಿಭಾಗ) ರವರು ಮಾಹಿತಿ ನೀಡಿದರು. | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ) |
| 14. | ಶ್ರೀ ನಾಗೇಂದ್ರ ಸದಸ್ಯರು ರವರು ಕಿರಯ ಆರೋಗ್ಯ ಪರಿವೀಕ್ಷಕರು ವಾರ್ಡ್ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗಗಳಲ್ಲಿ ಎಳನೀರು ಮಾರುತ್ತಿರುವವರನ್ನು ತೆರವುಗೊಳಿಸಬೇಕು ಎಂದು ಕೋರಿದರು. ಇದಕ್ಕೆ ಕಿರಯ ಆರೋಗ್ಯ ಪರಿವೀಕ್ಷಕರು ತೆರವುಗೊಳಿಸಲಾಗುವುದು ಎಂದು ತಿಳಿಸಿದರು. | ಕಿರಿಯ ಆರೋಗ್ಯ ಪರಿವೀಕ್ಷಕರು |
| 15. | ಶ್ರೀ ನಾಗೇಂದ್ರ ಸದಸ್ಯರು ರವರು ಖಾಲಿ ನಿವೇಶನಗಳ ಮಾಲೀಕರಿಗೆ ಖಾಲಿ ಸ್ಥಳವನ್ನು ಸ್ವಚ್ಛ ಮಾಡುವಂತೆ ನೋಟೀಸ್ ಜಾರಿ ಮಾಡಲು ಕೋರಿದರು. ಇದಕ್ಕೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಮಹಾಲಕ್ಷ್ಮೀಪುರಂ (ಘನತ್ಯಾಜ್ಯ ವಿಭಾಗ) ರವರು ಸ್ವತ್ತಿನ ಮಾಲೀಕರ ಮಾಹಿತಿ ನಮಗೆ ಲಭ್ಯವಿರುವುದಿಲ್ಲ ಕಂದಾಯ ಇಲಾಖೆರವರೆ ಮಾಹಿತಿ ನೀಡಬೇಕೆಂದು ತಿಳಿಸಿದರು. ಶ್ರೀ ನಿಂಗರಾಜು ರವರು ಸ್ವತ್ತಿನ ಮಾಲೀಕರು ಪ್ರಸ್ತುತ ವಾಸವಿರು ವಿಳಾಸದ ಬಗ್ಗೆ ಮಾಹಿತಿ ಲಭ್ಯವಿರುವುದಿಲ್ಲ ಎಂದು ತಿಳಿಸಿದರು. | ಘನತ್ಯಾಜ್ಯ ಇಲಾಖೆ ಹಾಗೂ ಕಂದಾಯ ಇಲಾಖೆ |
| 16. | ಶ್ರೀ ಧನಂಜಯ ಜಿ.ಟಿ ಕಾರ್ಯದರ್ಶಿಗಳು ರವರು ಅಂತಿಮವಾಗಿ ಸಭೆಗೆ ಹಾಜರಿದ್ದ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು ಮತ್ತು ಸಾರ್ವಜನಿಕರಿಗೆ ವಂದನೆಗಳು ಹೇಳುತ್ತಾ ಸಭೆಯನ್ನು ಮುಕ್ತಾಯಗೊಳಿಸಿದರು. | – |

ಅಧ್ಯಕ್ಷರು

L. Venkatesh

ವಾರ್ಡ್ ಕಮಿಟಿ, ವಾರ್ಡ್.ಸಂಖ್ಯೆ.44

ಮಾರಪ್ಪನಪಾಳ್ಯ

Scanned with CamScanner